ಶ್ರೀ ಆರ್.ಶ್ರೀನಿವಾಸ (ತೋಟಗಾರಿಕೆ ಸಚಿವರು):

ಅ) ಹನಿ ನೀರಾವರಿಯನ್ನು ಕಡ್ಡಾಯಗೊಳಿಸುವುದು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ. ಆದರೆ ತೋಟಗಾರಿಕೆ ಬೆಳೆಗಳನ್ನು ರಕ್ಷಿಸಲು ಹನಿನೀರಾವರಿಯನ್ನು ಜನಪ್ರಿಯಗೊಳಿಸಲು ಅಗತ್ಯ ಕ್ರಮಕ್ಕೆಗೊಳ್ಳಲಾಗುತ್ತಿದೆ.

ಆ) ಬಡ ರೈತರಿಗೆ ಅನುಕೂಲ ಕಲ್ಪಿಸಲು ರಾಜ್ಯಾದ್ಯಂತ ಗಂಗಾಕಲ್ಯಾಣ ಯೋಜನೆಯ ಫಲಾನುಭವಿಗಳಿಗೆ ಶೇ.100 ಸಬ್ಸಿಡಿಯನ್ನು ಒದಗಿಸಲಾಗುತ್ತಿದೆ. ಕೋಲಾರ ಮತ್ತು ಬಿಜಾಪುರ ಜಿಲ್ಲೆಗಳನ್ನು ಹೊರತುಪಡಿಸಿ ಇತರೆ ಜಿಲ್ಲೆಯ ಎಲ್ಲಾ ರೈತರಿಗೆ ಶೇಕಡ 50 ಸಬ್ಸಿಡಿಯನ್ನು ಒದಗಿಸಲಾಗುತ್ತಿದೆ. ಬಿಜಾಪುರ ಮತ್ತು ಕೋಲಾರ ಜಿಲ್ಲೆಯಲ್ಲಿ 2003–04 ಮತ್ತು 2004–05 ಸಾಲಿಗೆ ಮಾತ್ರ ವಿಶೇಷ ಪ್ರಕರಣವೆಂದು ಪರಿಗಣಿಸಿ ಶೇಕಡ 100 ರ ಸಬ್ಸಿಡಿಯನ್ನು ಒದಗಿಸಲಾಗುತ್ತಿದೆ.

1460(323) ಶ್ರೀ ಓಲೇಕಾರ್ ನೆಹರು ಚನ್ನಬಸಪ್ಪ (ಬ್ಯಾಡಗಿ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 31.03.2004ಕ್ಕೆ ಅನ್ವಯವಾಗುವಂತೆ ರಾಜ್ಯದ ಸಹಕಾರಿ ಅಪೆಕ್ಸ್ ಬ್ಯಾಂಕಿಗೆ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳಿಂದ ಬರತಕ್ಕ ಅಸಲು ಹಾಗೂ ಬಡ್ಡಿ ಮೊತ್ತ ಎಷ್ಟು? (ವಿವರ ನೀಡುವುದು)

ಆ) ರಾಜ್ಯದ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳಿಗೆ ಆಯಾ ಜಿಲ್ಲಾ ಪ್ರಾಥಮಿಕ ಸಹಕಾರಿ ವ್ಯವಸಾಯ ಪತ್ತಿನ ಸಂಘಗಳ ಬ್ಯಾಂಕುಗಳಿಂದ ಬರಬೇಕಾದ ಅಸಲು ಮತ್ತು ಬಡ್ಡಿ ಮೊತ್ತ ದಿನಾಂಕ: 31.03.2004ಕ್ಕೆ ಅನ್ವಯಿಸುವಂತೆ ಎಷ್ಟು? (ವಿವರ ನೀಡುವುದು)

ಶ್ರೀ ಆರ್.ವಿ.ದೇಶಪಾಂಡೆ (ಸಹಕಾರ ಸಚಿವರು):

ಅ) ದಿ:31.03.2004ಕ್ಕೆ ರಾಜ್ಯದ ಸಹಕಾರಿ ಅಪೆಕ್ಸ್ ಬ್ಯಾಂಕಿಗೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಿಂದ ರೂ.1179.01 ಕೋಟಿ ಅಸಲು ಮತ್ತು ರೂ. 14.17 ಕೋಟಿ ಬಡ್ಡಿ ಬರಬೇಕಾಗಿರುತ್ತದೆ.

ಆ) ದಿ:31.03.2004ಕ್ಕೆ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳಿಗೆ ಆಯ ಜಿಲ್ಲಾ ಪ್ರಾಥಮಿಕ ಸಹಕಾರಿ ವ್ಯವಸಾಯ ಪತ್ತಿನ ಸಂಘಗಳ/ಬ್ಯಾಂಕುಗಳಿಂದ ರೂ.2181.11 ಕೋಟಿ ಅಸಲು ಹಾಗೂ ರೂ.430.00 ಕೋಟಿ ಬಡ್ಡಿ ಬರಬೇಕಾಗಿರುತ್ತದೆ.

ವಿವರ ಕೆಳಕಂಡಂತಿರುತ್ತದೆ.

(ರೂ.ಕೋಟಿಗಳಲ್ಲಿ)

ಸಾಲದ ವಿವರ	ಅಸಲು	ಬಡ್ಡಿ
ಅಲ್ಪಾವಧಿ ಕೃಷಿ ಸಾಲ	1905.76	323.57
ಮಧ್ಯಮಾವಧಿ ಸಾಲ	275.35	106.43
ಒಟ್ಟು ರೂ.	2181.11	430.00

1461(325) ಶ್ರೀ ಓಲೆಕಾರ್ ನೆಹರು ಚನ್ನಬಸಪ್ಪ (ಬ್ಯಾಡಗಿ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

1) ರಾಜ್ಯದಲ್ಲಿ ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕು ದಿ: 31.03.2004ಕ್ಕೆ ಹೊಂದಿರುವ ಒಟ್ಟು ನಷ್ಟದ ಮೊಬಲಗು ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)